ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಮೂರನೇ ಮಹಡಿ, ವಿಶ್ವೇಶ್ವರಯ್ಯ ಮಿನಿ ಗೋಪುರ, ಡಾ॥ ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು–560 001
E-mail ID: icps.kar@gmail.com Ph.No.080-22869381/82

ಸಂ:ಕೆಎಸ್‌ಐಸಿಪಿಎಸ್/ಮರ/ಮೂ.ಸೌ–128/2020–21 ದಿನಾಂಕ:04.03.2021

## ಸುತ್ತೋಲೆ

ವಿಷಯ:– ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯದ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ.

ಉಲ್ಲೇಖ:– 1) ಹೆಚ್ಚುವರಿ ಬಾಲನ್ಯಾಯ ಮಂಡಳಿ, ಬೆಂಗಳೂರು ನಗರ ಜಿಲ್ಲೆಯ ಸದಸ್ಯರ ಮನವಿ ದಿನಾಂಕ:31.12.2020

2) ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರೊಡನೆ ಚರ್ಚಿಸಿದಂತೆ.

******

ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸ ಬೇಕಾಗಿರುತ್ತದೆ. ದಿನಾಂಕ:31.12.2020ರಂದು ಹೆಚ್ಚುವರಿ ಬಾಲನ್ಯಾಯ ಮಂಡಳಿ, ಬೆಂಗಳೂರು ನಗರ ಜಿಲ್ಲೆಯ ಸದಸ್ಯರು ನಿರ್ದೇಶಕರೊಂದಿಗೆ ಚರ್ಚಿಸಿ ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕವಾದ ಶೌಚಾಲಯದ ಸೌಕರ್ಯ ಇರುವುದಿಲ್ಲವೆಂದು ಹಾಗೂ ಪ್ರತಿನಿತ್ಯ ಶೌಚಾಲಯಗಳ ಸ್ವಚ್ಛತೆಯ ನಿರ್ವಹಣೆ ಸರಿಯಾಗಿ ಮಾಡಿಸುವುದಿಲ್ಲವೆಂದು ತಿಳಿಸಿರುತ್ತಾರೆ. ಇದರ ಬಗ್ಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಇವರೊಡನೆ ಚರ್ಚಿಸಿದಾಗ ಹಲವಾರು ಕಡೆ ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಕಛೇರಿಗಳಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕ ಶೌಚಾಲಯ ಇಲ್ಲದೇ ಇರುವುದು ಹಾಗೂ ಮಕ್ಕಳ ಪಾಲನಾ ಸಂಸ್ಥೆಗಳು, ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿಗಳ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಕಛೇರಿಗಳಲ್ಲೂ ಶೌಚಾಲಯಗಳನ್ನು ಶುಚಿಗೊಳಿಸಲು ಸೂಕ್ತ ವ್ಯವಸ್ಥೆ ಇರುವುದಿಲ್ಲ ಎಂಬ ಅಂಶ ಗಮನಕ್ಕೆ ಬಂದಿರುತ್ತದೆ.

ಮಹಿಳೆಯರಿಗೆ ಪ್ರತ್ಯೇಕವಾದ ಶೌಚಾಲಯಗಳನ್ನು ನಿರ್ಮಿಸುವುದು ಮತ್ತು ಎಲ್ಲಾ ಶೌಚಾಲಯಗಳನ್ನು ಪ್ರತಿನಿತ್ಯ ವ್ಯವಸ್ಥಿತವಾಗಿ ಸ್ವಚ್ಛತೆ, ನಿರ್ವಹಣೆ ಮಾಡುವುದು ಅತೀ ಅವಶ್ಯವಾಗಿರುತ್ತದೆ. ಆದುದರಿಂದ ಈ ಕೆಳಕಂಡ ಕ್ರಮಗಳನ್ನು ತುರ್ತಾಗಿ ನಿರ್ವಹಿಸಲು ಈ ಮೂಲಕ ನಿರ್ದೇಶಿಸಲಾಗಿದೆ.

**I. ಎಲ್ಲಾ ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕ ಶೌಚಾಲಯದ ವ್ಯವಸ್ಥೆಯನ್ನು ಮಾಡಲು ಈ ಕೆಳಕಂಡ ಕ್ರಮಗಳನ್ನು ಜರುಗಿಸುವುದು.**

- ➢ ತಕ್ಷಣ ತಾತ್ಕಾಲಿಕ ಮಹಿಳಾ ಶೌಚಾಲಯಗಳ ವ್ಯವಸ್ಥೆ ಮಾಡುವುದು.
- ➢ ಶಾಶ್ವತ ಮಹಿಳಾ ಶೌಚಾಲಯಗಳನ್ನು ನಿರ್ಮಿಸಲು ಕ್ರಮವಹಿಸುವುದು.

- ಈ ಉದ್ದೇಶಕ್ಕಾಗಿ ಅನುದಾನ ಲಭ್ಯವಿದ್ದಲ್ಲಿ ಬಳಸಿಕೊಳ್ಳುವುದು
- ಈ ಉದ್ದೇಶಕ್ಕಾಗಿ ಅನುದಾನ ಲಭ್ಯವಿಲ್ಲದಿದ್ದಲ್ಲಿ ಹೆಚ್ಚುವರಿ ಅನುದಾನ ಬಿಡುಗಡೆಗಾಗಿ ಪ್ರಸ್ತಾವನೆಯನ್ನು ಪ್ರಧಾನ ಕಛೇರಿಗೆ ಕೂಡಲೇ ಸಲ್ಲಿಸುವುದು.
- ಸ್ವಚ್ಛ ಭಾರತ್ ಮಿಷನ್ ಯೋಜನೆಯ ಪ್ರಸ್ತುತ ಮಾರ್ಗಸೂಚಿಯಂತೆ ಹೊಸ ಶೌಚಾಲಯಗಳ ನಿರ್ಮಾಣ ಕಾರ್ಯಗಳನ್ನು ಮಾಡಬೇಕಾಗಿದ್ದು, ಕನಿಷ್ಟ 5 ವರ್ಷಗಳವರೆಗೆ ನಿರ್ವಹಣೆಯನ್ನು ಮಾಡಬಹುದಾಗಿದೆ. ಭಾರತ ಸರ್ಕಾರವು ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಅನುದಾನವನ್ನು ಒದಗಿಸುತ್ತಿದ್ದು ಇದರಡಿಯಲ್ಲಿ ಈ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

**II. ಬಾಲನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳ ಶೌಚಾಲಯಗಳನ್ನು ಶುಚಿಗೊಳಿಸುವ ಬಗ್ಗೆ:**

1. ಶೌಚಾಲಯಗಳನ್ನು ಪ್ರತಿನಿತ್ಯ ಕನಿಷ್ಠ 2 ಬಾರಿ ಸ್ವಚ್ಛ ಮಾಡಿ, ಶುಚಿತ್ವವನ್ನು ಕಾಪಾಡುವುದು.
2. ಶೌಚಾಲಯಗಳ ನಿರ್ವಹಣೆಗೆ ತಗಲುವ ಸೇವಾ ವೆಚ್ಚವನ್ನು (cleaning charges) ಲೆಕ್ಕಶೀರ್ಷಿಕೆ 2235–02–102–0–36 ರ ಸಾಮಾನ್ಯ ವೆಚ್ಚದಡಿಯಲ್ಲಿ ಉಪಶೀರ್ಷಿಕೆ 051ರ ಅಡಿಯಲ್ಲಿ ದಿನದ/ಮಾಸಿಕ ಆಧಾರದ ಮೇಲೆ ಭರಿಸಬಹುದಾಗಿದೆ.
3. ಶೌಚಾಲಯದ ಸ್ವಚ್ಛತೆಗಾಗಿ ಅವಶ್ಯವಿರುವ ಸಾಮಾಗ್ರಿಗಳಾದ ಫಿನಾಯಿಲ್, ಆ್ಯಸಿಡ್ ಇತ್ಯಾದಿ ಸಾಮಗ್ರಿಯನ್ನು ಲೆಕ್ಕಶೀರ್ಷಿಕೆ 2235–02–102–0–36 ಸಾಮಗ್ರಿ ಸರಬರಾಜು 221 ಅಡಿಯಲ್ಲಿ ಭರಿಸಬಹುದಾಗಿದೆ.

ಮೇಲೆ ಸೂಚಿಸಿರುವಂತೆ ಅಗತ್ಯ ಕ್ರಮ ತೆಗೆದುಕೊಂಡು ಪ್ರತಿನಿತ್ಯ ಶೌಚಾಲಯಗಳನ್ನು ಸ್ವಚ್ಛ ಮಾಡಿಸಲು ಹಾಗೂ ಮಹಿಳೆಯರಿಗಾಗಿ ಪ್ರತ್ಯೇಕ ಶೌಚಾಲಯಗಳನ್ನು ತಕ್ಷಣ ನಿರ್ಮಿಸಲು ಸೂಕ್ತ ಕ್ರಮ ತೆಗೆದುಕೊಳ್ಳಲು ಹಾಗೂ ತೆಗೆದುಕೊಂಡ ಕ್ರಮದ ಬಗ್ಗೆ **ಒಂದು ವಾರದೊಳಗೆ ಅನುಪಾಲನಾ ವರದಿಯನ್ನು** ಪ್ರಧಾನ ಕಛೇರಿಗೆ ಸಲ್ಲಿಸಲು ತಿಳಿಸಿದೆ.

04.03.2021

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

**ಪ್ರತಿಯನ್ನು:**

1) ಎಲ್ಲಾ ಬಾಲನ್ಯಾಯ ಮಂಡಳಿಗಳು ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರುಗಳಿಗೆ ಮಾಹಿತಿಗಾಗಿ
2) ಎಲ್ಲಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ
3) ಎಲ್ಲಾ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ.